## ಕರ್ನಾಟಕ ಸರ್ಕಾರದ ನಡಾವಳಿಗಳು

**ವಿಷಯ** ರಾಜ್ಯದ ಪದವೀಧರರ / ಡಿಪ್ಲೋಮಾ ಪಡೆದ ನಿರುದ್ಯೋಗಿ ವಿದ್ಯಾವಂತ ಯುವ ಜನರಿಗೆ ನಿರುದ್ಯೋಗ ಭತ್ಯೆ ಪಾವತಿಸಲು **"ಕರ್ನಾಟಕ ಯುವ ನಿಧಿ ಯೋಜನೆ"** ಯನ್ನು ಜಾರಿಗೆ ತರುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರಿ ಆದೇಶದ ಸಂಖ್ಯೆ: ಕೌಉಜೀಇ / 76 / ಕೌಗುಇ / 2023, ದಿನಾಂಕ:20.05.2023.
2. ದಿನಾಂಕ: 02.06.2023 ರಂದು ನಡೆದ ಸಚಿವ ಸಂಪುಟದ ಸಭೆಯ ನಿರ್ಣಯ ಸಂಖ್ಯೆ:ಸಿ:319/2023.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರಿ ಆದೇಶದಲ್ಲಿ ರಾಜ್ಯದಲ್ಲಿ 2022-23 ರಲ್ಲಿ ತೇರ್ಗಡೆಯಾದ ಪದವೀಧರ ನಿರುದ್ಯೋಗಿಗಳಿಗೆ ಪ್ರತಿ ತಿಂಗಳು ರೂ.3000/- (ಮೂರು ಸಾವಿರ ರೂ.ಗಳು ಮಾತ್ರ) ಹಾಗೂ ಡಿಪ್ಲೋಮಾ ಹೊಂದಿದ ನಿರುದ್ಯೋಗಿಗಳಿಗೆ ಪ್ರತಿ ತಿಂಗಳು ರೂ.1500/- (ಒಂದು ಸಾವಿರದ ಐದುನೂರು ರೂ.ಗಳು ಮಾತ್ರ) ರಂತೆ ನಿರುದ್ಯೋಗ ಭತ್ಯೆ ನೀಡುವ **"ಯುವ ನಿಧಿ ಯೋಜನೆ"** ಯನ್ನು ಜಾರಿಗೊಳಿಸಲು ಸರ್ಕಾರವು ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಸಚಿವ ಸಂಪುಟದ ಅನುಮೋದನೆ ನಂತರ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಷರತ್ತು ಮತ್ತು ನಿಬಂಧನೆಗಳು ಹಾಗೂ ಅನರ್ಹತೆಯ ಮಾನದಂಡಗಳನ್ನು ವಿಧಿಸಿ ಆದೇಶ ಹೊರಡಿಸಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ ಈ ಆದೇಶ.

## ಸರ್ಕಾರಿ ಆದೇಶ ಸಂಖ್ಯೆ: ಕೌಉಜೀಇ 55 ಕೃತಇ 2023, ದಿನಾಂಕ:03.06.2023

2023 ರ ವರ್ಷದಲ್ಲಿ ತೇರ್ಗಡೆಯಾಗಿ, ತೇರ್ಗಡೆಯಾದ ದಿನಾಂಕದಿಂದ 180 ದಿನಗಳು ಕಳೆದರೂ ಉದ್ಯೋಗ ಲಭಿಸದ ಪದವೀಧರ ನಿರುದ್ಯೋಗಿಗಳಿಗೆ (ವೃತ್ತಿಪರ ಕೋರ್ಸ್‌ಗಳು ಸೇರಿದಂತೆ) ಪ್ರತಿ ತಿಂಗಳು ರೂ.3000/- (ಮೂರು ಸಾವಿರ ರೂ.ಗಳು ಮಾತ್ರ) ನಿರುದ್ಯೋಗ ಭತ್ಯೆ ಹಾಗೂ ಡಿಪ್ಲೋಮಾ ಪಾಸಾದ ನಿರುದ್ಯೋಗಿಗಳಿಗೆ ಪ್ರತಿ ತಿಂಗಳು ರೂ.1500/- (ಒಂದು ಸಾವಿರದ ಐದುನೂರು ರೂ.ಗಳು ಮಾತ್ರ) ನಿರುದ್ಯೋಗ ಭತ್ಯೆಯನ್ನು ಉದ್ಯೋಗ ಸಿಗುವವರೆಗೆ ಅಥವಾ ಗರಿಷ್ಠ ಎರಡು ವರ್ಷಗಳ ಅವಧಿಗೆ ನೀಡಲು **"ಯುವ ನಿಧಿ ಯೋಜನೆ"** ಯನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

**ಷರತ್ತು ಮತ್ತು ನಿಬಂಧನೆಗಳು:**

1. ಪದವಿ / ಡಿಪ್ಲೋಮಾ ಮುಗಿಸಿ 6 ತಿಂಗಳಾದರೂ ಉದ್ಯೋಗ ಲಭಿಸದೇ ಇರುವ ಕನ್ನಡಿಗರಿಗೆ (Domicile of Karnataka) ಮಾತ್ರ ಈ ಯೋಜನೆಯು ಅನ್ವಯವಾಗುತ್ತದೆ.
2. ಈ ಸೌಲಭ್ಯವು ಎರಡು ವರ್ಷಗಳ ಅವಧಿಗೆ ಮಾತ್ರ ಅನ್ವಯಿಸುತ್ತದೆ. ಎರಡು ವರ್ಷಗಳ ಅವಧಿಯೊಳಗೆ ಉದ್ಯೋಗ ದೊರೆತಲ್ಲಿ ಫಲಾನುಭವಿಗೆ ಈ ಯೋಜನೆಯ ಸೌಲಭ್ಯವನ್ನು ಸ್ಥಗಿತಗೊಳಿಸಲಾಗುವುದು.
3. ಭತ್ಯೆಯನ್ನು DBT ಮೂಲಕ ಒದಗಿಸಲು ಉದ್ದೇಶಿಸಲಾಗಿದ್ದು, ಫಲಾನುಭವಿಗಳು ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವುದು.
4. ನಿರುದ್ಯೋಗ ಸ್ಥಿತಿಯ ಬಗ್ಗೆ ಸ್ವತಂತ್ರ ಪರಿಶೀಲನೆ ಇರಬೇಕು ಉದ್ಯೋಗ ಪಡೆದ ನಂತರ ತಪ್ಪು ಘೋಷಣೆ ಅಥವಾ ಘೋಷಿಸಲು ವಿಫಲವಾದರೆ ದಂಡ ವಿಧಿಸಲಾಗುವುದು.

**ಯೋಜನೆಗೆ ಅರ್ಹರಾಗದೇ ಇರುವವರು:**

1. ಉನ್ನತ ವ್ಯಾಸಂಗಕ್ಕೆ ದಾಖಲಾತಿ ಹೊಂದಿ ವಿದ್ಯಾಭ್ಯಾಸ ಮುಂದುವರೆಸುವವರು.
2. ಶಿಶಿಕ್ಷು (Apprentice) ವೇತನವನ್ನು ಪಡೆಯುತ್ತಿರುವವರು.
3. ಸರ್ಕಾರಿ/ಖಾಸಗಿ ವಲಯದಲ್ಲಿ ಉದ್ಯೋಗ ಪಡೆದಿರುವವರು.

4. ರಾಜ್ಯ ಮತ್ತು ಕೇಂದ್ರದ ವಿವಿಧ ಯೋಜನೆಯಡಿ ಹಾಗೂ ಬ್ಯಾಂಕ್‌ಗಳಲ್ಲಿ ಸಾಲ ಪಡೆದು ಸ್ವಯಂ ಉದ್ಯೋಗ ಹೊಂದಿದವರು.

ಈ ಆದೇಶವನ್ನು ಸಚಿವ ಸಂಪುಟದ ಪ್ರಕರಣ ಸಂಖ್ಯೆ: ಸಿ:319/2023, ದಿನಾಂಕ: 02.06.2023ರ ಅನುಮೋದನೆಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

M. S. [signature] 3/6/2023.

(ಎಂ. ಎಸ್. ವೆಂಕಟೇಶ್)
ಸರ್ಕಾರದ ಉಪ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ.

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ- ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ 1000 ಪ್ರತಿಗಳನ್ನು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಗೆ ಒದಗಿಸಲು.

**ಪ್ರತಿಗಳು:**

1. ಮಹಾಲೇಖಪಾಲರು (ಎ&ಇ), (ಜಿ&ಎಸ್.ಎಸ್.ಎ), (ಇ&ಆರ್.ಎಸ್.ಎ), ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.
5. ಸರ್ಕಾರದ ಕಾರ್ಯದರ್ಶಿ (ವೆಚ್ಚ), ಆರ್ಥಿಕ ಇಲಾಖೆ.
6. ಸರ್ಕಾರದ ಕಾರ್ಯದರ್ಶಿ, ಸಿಆಸುಇ (ಇ-ಆಡಳಿತ).
7. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯ, ಬೆಂಗಳೂರು.
8. ಖಜಾನೆ ಆಯುಕ್ತರು, ಖಜಾನೆ ಇಲಾಖೆ, ನಂ.3, 6ನೇ ಮಹಡಿ, KPCL ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ, ಬೆಂಗಳೂರು.
10. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಜೀವನೋಪಾಯ ಅಭಿಯಾನ (ನಗರ & ಗ್ರಾಮೀಣ), ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, ಜಿಟಿಟಿಸಿ, ಬೆಂಗಳೂರು.
12. ನಿರ್ದೇಶಕರು, ಸಿಡಾಕ್ - ಧಾರವಾಡ.
13. ಸರ್ಕಾರದ ಜಂಟಿ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನಸೌಧ, ಬೆಂಗಳೂರು. (ಸಚಿವ ಸಂಪುಟದ ಪ್ರಕರಣ ಸಂಖ್ಯೆ: ಸಿ:319/2023, ದಿನಾಂಕ:02.06.2023)
14. ಜಂಟಿ ಕಾರ್ಯದರ್ಶಿ - ಕೆಜಿಟಿಟಿಐ.
15. ಖಜಾನಾಧಿಕಾರಿ, ರಾಜ್ಯಹುಜೂರ್ ಖಜಾನೆ, ಬೆಂಗಳೂರು.
16. ನಿರ್ದೇಶಕರು, ವಿಶೇಷ ಕೋಶ, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
17. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3&9), ವಿಧಾನಸೌಧ, ಬೆಂಗಳೂರು.
18. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
19. ಎಲ್ಲಾ ಜಿಲ್ಲೆಯ ಜಿಲ್ಲಾ ಪಂಚಾಯಿತಿಗಳ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು.
20. ಎಲ್ಲಾ ಜಿಲ್ಲೆಯ ಜಿಲ್ಲಾ ಕೌಶಲ್ಯ ಅಭಿವೃದ್ಧಿ ಅಧಿಕಾರಿಗಳು.

**<u>ಮಾಹಿತಿಗಾಗಿ:-</u>**

1. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು.

2. ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ & ಜೀವನೋಪಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ & ಜೀವನೋಪಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. **ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.**

# ಯುವನಿಧಿ ಯೋಜನೆಯ ಮಾರ್ಗಸೂಚಿಗಳು

1. ಪದವಿ/ಡಿಪ್ಲೋಮೊ ಪಡೆದ ನಿರುದ್ಯೋಗಿಗಳು ಅಂದರೆ 180 ದಿನಗಳ ನಂತರವೂ ಉದ್ಯೋಗ ಪಡೆಯದ ನಿರುದ್ಯೋಗಿಗಳಿಂದ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯು (DITE) ನಿರುದ್ಯೋಗ ಭತ್ಯೆ ನೀಡಲು ಅರ್ಜಿಗಳನ್ನು ಆಹ್ವಾನಿಸುತ್ತದೆ. 2022-23 ಶೈಕ್ಷಣಿಕ ವರ್ಷದಲ್ಲಿ ಪದವಿ/ಡಿಪ್ಲೋಮೊ ಪಡೆದ ವಿದ್ಯಾರ್ಥಿಗಳು (ಅಂದರೆ, 2023ನೇ ವರ್ಷದಲ್ಲಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು) ಯುವನಿಧಿ ಯೋಜನೆಗೆ ನೋಂದಾಯಿಸಿಕೊಳ್ಳಲು ಅರ್ಹರಾಗಿರುತ್ತಾರೆ.

   **a) ಅನರ್ಹತೆಗಳು:**

      I. ಸರ್ಕಾರಿ. / ಸರ್ಕಾರಿ ಅನುದಾನಿತ ಸಂಸ್ಥೆ / ಖಾಸಗಿ ವಲಯಗಳಲ್ಲಿ ಉದ್ಯೋಗದಲ್ಲಿರುವ ಅಭ್ಯರ್ಥಿಗಳು.
      II. ಸ್ವಯಂ ಉದ್ಯೋಗಿಗಳಾಗಿರುವ ಅಭ್ಯರ್ಥಿಗಳು.
      III. ವಿದ್ಯಾಭ್ಯಾಸವನ್ನು ಮುಂದುವರೆಸುವ ಅಭ್ಯರ್ಥಿಗಳು.

2. 2023 ರಲ್ಲಿ ಪದವಿ / ಡಿಪ್ಲೋಮಾ ತೇರ್ಗಡೆಯಾದ ನಂತರ ಕನಿಷ್ಠ 6 ತಿಂಗಳವರೆಗೆ ಉದ್ಯೋಗವನ್ನು ಪಡೆಯದ ಮತ್ತು ಕರ್ನಾಟಕದಲ್ಲಿ ವಾಸವಿದ್ದು, ವಿದ್ಯಾರ್ಥಿಯಾಗಿರುವ ಕನ್ನಡಿಗರಿಗೆ ಮಾತ್ರ ಈ ಯೋಜನೆಯು ಅನ್ವಯಿಸುತ್ತದೆ.

   **ಎ) ವಾಸವಿರುವ ವಿದ್ಯಾರ್ಥಿ ಎಂದರೆ ಕರ್ನಾಟಕದಲ್ಲಿ ಕನಿಷ್ಠ 6 ವರ್ಷಗಳವರೆಗೆ ಪದವಿ / ಡಿಪ್ಲೊಮಾದವರೆಗೆ ಅಧ್ಯಯನ ಮಾಡಿದವರು. 6 ವರ್ಷಗಳ ವಾಸವಿರುವುದನ್ನು ಈ ಕೆಳಗಿನಂತೆ ಪರಿಶೀಲಿಸಲಾಗುತ್ತದೆ:**

      i. ಎಸ್ಎಸ್ಎಲ್ಸಿ ಅಂಕಪಟ್ಟಿ, ಪಿಯುಸಿ ಅಂಕಪಟ್ಟಿ ಮತ್ತು ಪದವಿ ಪ್ರಮಾಣ ಪತ್ರ/ಅಂಕಪಟ್ಟಿಗಳು ಅಥವಾ
      ii ಎಸ್ಎಸ್ಎಲ್ಸಿ ಅಂಕಪಟ್ಟಿ, ಪಿಯುಸಿ ಅಂಕಪಟ್ಟಿ ಮತ್ತು ಡಿಪ್ಲೋಮಾ ಪ್ರಮಾಣ ಪತ್ರ ಅಥವಾ ಅಂಕಪಟ್ಟಿ ಅಥವಾ
      iii ಸಾಮಾನ್ಯ ಪ್ರವೇಶ ಪ್ರರೀಕ್ಷೆಯ (ಸಿಇಟಿ) ನೋಂದಣಿ ಸಂಖ್ಯೆ ಮತ್ತು ಪದವಿ ಪ್ರಮಾಣಪತ್ರ ಅಥವಾ
      iv. ಪಡಿತರ ಚೀಟಿ ನೀಡಿದ ದಿನಾಂಕ ಮತ್ತು ಪದವಿ ಪ್ರಮಾಣ ಪತ್ರ
      v. NIOS (ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್) ನೀಡಿದ S.S.L.C. ಅಂಕಪಟ್ಟಿಯನ್ನು ಸಹ ವಾಸಸ್ಥಳ ಪರಿಶೀಲನೆಗಾಗಿ ಪರಿಗಣಿಸುವುದು.

   **ಬಿ) ಪದವಿ ಅಥವಾ ಡಿಪ್ಲೋಮಾ ಪ್ರಮಾಣ ಪತ್ರ:**

      i. ಅಭ್ಯರ್ಥಿಯ ಪದವಿ / ಡಿಪ್ಲೋಮಾ ಹೊಂದಿರುವ ಸ್ಥಿತಿಯ ಬಗ್ಗೆ ಪರಿಶೀಲಿಸಲು National Academic Depository (NAD) ಯಲ್ಲಿ ಅಪ್‌ಲೋಡ್ ಮಾಡಲಾದ ಅಭ್ಯರ್ಥಿಗಳ ಪದವಿ/ಡಿಪ್ಲೋಮೊ ಪ್ರಮಾಣ ಪತ್ರ ಅಥವಾ ತಾತ್ಕಾಲಿಕ ಪದವಿ/ಡಿಪ್ಲೋಮೊ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದು.
      ii. ಫಲಿತಾಂಶಗಳ ಪ್ರಕಟಣೆಯ ದಿನಾಂಕದಿಂದ ಒಂದು ವಾರದೊಳಗೆ ವಿದ್ಯಾರ್ಥಿಗಳ ಪದವಿ/ಡಿಪ್ಲೋಮೊ ಪ್ರಮಾಣ ಪತ್ರಗಳು ಅಥವಾ ತಾತ್ಕಾಲಿಕ ಪದವಿ/ಡಿಪ್ಲೋಮೊ ಪ್ರಮಾಣ ಪತ್ರಗಳು NAD ನಲ್ಲಿ ಅಪ್‌ಲೋಡ್

ಮಾಡಲಾಗಿರುವುದನ್ನು ವಿಶ್ವವಿದ್ಯಾಲಯಗಳು ಮತ್ತು ಮಂಡಳಿಗಳು ಖಚಿಪಡಿಸಿಕೊಳ್ಳತಕ್ಕದ್ದು.

iii. ಅಭ್ಯರ್ಥಿಗಳು ನೋಂದಣಿ ಮಾಡಿಕೊಳ್ಳುವ ಮೊದಲು ಡಿಜಿಲಾಕರ್‌ನಲ್ಲಿ ಡಿಜಿಲಾಕರ್ ಖಾತೆಯನ್ನು ಸೃಜಿಸುವ ಮೂಲಕ ತಮ್ಮ NAD ಪ್ರಮಾಣ ಪತ್ರವನ್ನು ಪಡೆದಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

iv. NAD ಕರ್ನಾಟಕ ಪೋರ್ಟಲ್‌ನಲ್ಲಿ ಚಾಟ್‌ಬಾಟ್ ಉಪಯುಕ್ತತೆಯನ್ನು ಬಳಸಿಕೊಂಡು ಅಭ್ಯರ್ಥಿಗಳು ತಮ್ಮ ಡಿಜಿಲಾಕರ್‌ನಲ್ಲಿ ಪದವಿ/ ಡಿಪ್ಲೋಮೊ ಪ್ರಮಾಣ ಪತ್ರಗಳ ಲಭ್ಯತೆಯನ್ನು ಪರಿಶೀಲನೆ ಮಾಡತಕ್ಕದ್ದು.

3. ಅಭ್ಯರ್ಥಿಗಳು ನೇರ ನಗದು ವರ್ಗಾವಣೆಗಳನ್ನು (ಡಿಬಿಟಿ) ಸ್ವೀಕರಿಸಲು ಆಧಾರ್ ಸಂಖ್ಯೆ ಸೇರ್ಪಡೆಯಾದ ಬ್ಯಾಂಕ್ ಖಾತೆಯನ್ನು ಹೊಂದಿರತಕ್ಕದ್ದು.

4. ಅಭ್ಯರ್ಥಿಗಳು ತಮ್ಮ ಆಧಾರ್ ಸಂಖ್ಯೆಯನ್ನು ತಮ್ಮ ಮೊಬೈಲ್ ಸಂಖ್ಯೆಗೆ ಲಿಂಕ್ ಆಗಿರುವುದನ್ನು ಖಚಿತಪಡಿಸಕೊಳ್ಳತಕ್ಕದ್ದು.

**5. ಯುವನಿಧಿ ಯೋಜನೆಯ ಪ್ರಯೋಜನಗಳನ್ನು ಪಡೆಯಲು ಆಸಕ್ತಿ ಹೊಂದಿದ ಅಭ್ಯರ್ಥಿಗಳು ಯುವನಿಧಿ ಯೋಜನೆಯಡಿ ನೋಂದಾಯಿಸಿಕೊಳ್ಳಬೇಕು.**

i. ಎಲ್ಲಾ ಅಗತ್ಯ ದಾಖಲೆಗಳನ್ನು ಹೊಂದಿರುವ ವಿದ್ಯಾರ್ಥಿಗಳು ಮುಂಚಿತವಾಗಿ ಅಂದರೆ ತಾತ್ಕಾಲಿಕ ಪದವಿ ಪತ್ರ ಪಡೆದು 180 ದಿನಗಳು ಪೂರ್ಣಗೊಳ್ಳುವ ಮುಂಚೆ ಅರ್ಜಿ ಸಲ್ಲಿಸತಕ್ಕದ್ದು. ಆದರೆ 180 ದಿನಗಳ ನಂತರ ಸೌಲಭ್ಯವನ್ನು ನೀಡಲಾಗುವುದು.

ii. ಅಭ್ಯರ್ಥಿಯು ಅವಳು/ಅವನು ನಿರುದ್ಯೋಗಿ ಎಂದು ದೃಢೀಕರಿಸಬೇಕು ಮತ್ತು ಘೋಷಣೆಯನ್ನು ಸಲ್ಲಿಸುವುದು.

iii. ಉದ್ಯೋಗ ದೊರಕಿದ ನಂತರ ಅಭ್ಯರ್ಥಿಯು ತಕ್ಷಣವೇ ಮುಚ್ಚಳಿಕೆ ಪತ್ರ ನೀಡತಕ್ಕದ್ದು.

iv. ನೋಂದಾಯಿತ ಅಭ್ಯರ್ಥಿ ವಿವರಗಳನ್ನು NAD ಮೂಲಕ ಪರಿಶೀಲಿಸಲಾಗುವುದು. ಪದವಿ/ಡಿಪ್ಲೊಮಾದ ಪ್ರಮಾಣಪತ್ರಗಳನ್ನು manual ಅಪ್‌ಲೋಡ್ ಮಾಡಿದರೆ, ಅಪ್‌ಲೋಡ್ ಮಾಡಿದ ದಾಖಲೆಗಳ ವಿವರಗಳನ್ನು ಆಯಾ ವಿಶ್ವವಿದ್ಯಾಲಯದ ರಿಜಿಸ್ಟ್ರಾರ್ (ಮೌಲ್ಯಮಾಪನ) ಅವರಿಗೆ ರವಾನಿಸಲಾಗುವುದು, ಅವರಿಗೆ ಲಾಗಿನ್ credentials ಅನ್ನು ಒದಗಿಸಲಾಗುವುದು. ರಿಜಿಸ್ಟ್ರಾರ್ (ಮೌಲ್ಯಮಾಪನ) ರವರು ದಾಖಲೆಗಳ ದೃಢೀಕರಣವನ್ನು ಪರಿಶೀಲಿಸುವುದು ಮತ್ತು 5 ಕೆಲಸದ ದಿನಗಳ ನಿಗದಿತ ಅವಧಿಯೊಳಗೆ NAD ಪೋರ್ಟಲ್‌ನಲ್ಲಿ ಅದನ್ನು ಅಪ್‌ಲೋಡ್ ಮಾಡುವುದು.

v. ತಪ್ಪು ಘೋಷಣೆ ಅಥವಾ ಉದ್ಯೋಗ ಪಡೆದಿರುವುದನ್ನು ಘೋಷಿಸಲು ವಿಫಲವಾದರೆ ದಂಡ ವಿಧಿಸಲಾಗುತ್ತದೆ. ಪಾವತಿಸಿದ ಮೊತ್ತವನ್ನು ಕಾನೂನಿನ ಪ್ರಕಾರ ವಸೂಲಿ ಮಾಡಲಾಗುವುದು.

vi. ಜಂಟಿ ನಿರ್ದೇಶಕರು, (ಉದ್ಯೋಗ), ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯು ಅನುಮೋದಿಸಿ ಮತ್ತು ಅರ್ಹ ಅಭ್ಯರ್ಥಿಗಳಿಗೆ ಡಿಬಿಟಿ ಮೂಲಕ ಭತ್ಯೆಯನ್ನು ನೀಡಲು ನೋಂದಾಯಿತ ಅಭ್ಯರ್ಥಿಗಳ ವಿವರಗಳನ್ನು ನೀಡತಕ್ಕದ್ದು.

vii. ಯುವನಿಧಿ ಯೋಜನೆಯಡಿ ನೋಂದಾಯಿತ ಅಭ್ಯರ್ಥಿಗಳ ದತ್ತಾಂಶವನ್ನು ಪರಿಶೀಲನೆಗಾಗಿ ಸ್ಕಿಲ್ ಕನೆಕ್ಟ್ ಪೋರ್ಟಲ್‌ಗೆ ಲಭ್ಯವಿರುವ ದತ್ತಾಂಶದೊಂದಿಗೆ ವರ್ಗಾಯಿಸಲಾಗುವುದು

viii. ಅಭ್ಯರ್ಥಿಯು ಅವಳು/ಅವನು ನಿರುದ್ಯೋಗಿ ಎಂದು ಪ್ರತಿ ತಿಂಗಳು ಕಡ್ಡಾಯವಾಗಿ ದೃಢೀಕರಿಸುವುದು.

1. ಅಭ್ಯರ್ಥಿಯು ಸೇವಾ ಸಿಂಧು ಪೋರ್ಟಲ್‌ನಲ್ಲಿ ಉದ್ಯೋಗಿ ಅಥವಾ ನಿರುದ್ಯೋಗಿಯಾಗಿರುವುದನ್ನು ನಿಗದಿತ ನಮೂನೆಯಲ್ಲಿ ಪ್ರತಿ ತಿಂಗಳ 25 ನೇ ತಾರೀಖು ಅಥವಾ ಅದಕ್ಕಿಂತ ಮೊದಲು ಆಧಾರ್ ಆಧಾರಿತ OTP ಮೂಲಕ ಘೋಷಣೆ ಮಾಡತಕ್ಕದ್ದು.
2. ಸ್ವೀಕೃತವಾದ ಘೋಷಣೆಯ ಆಧಾರದ ಮೇಲೆ, ಮುಂದಿನ ಪಾವತಿಯನ್ನು ಸ್ವೀಕರಿಸಲಾಗುವುದು.

### 6. ಅನುದಾನ ಬಿಡುಗಡೆ ಮತ್ತು ಪಾವತಿ ಪ್ರಕ್ರಿಯೆ:

a) ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆರವರಿಗೆ ಸರ್ಕಾರದಿಂದ ಅನುದಾನವನ್ನು ಬಿಡುಗಡೆಗೊಳಿಸುವುದು.

b) ಡಿಡಿಓಗಳಾದ ಜಂಟಿ ನಿರ್ದೇಶಕರು (ಉದ್ಯೋಗ), ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ರವರಿಗೆ ರಾಜ್ಯ ಮಟ್ಟದ ಡಿಡಿಓ ಆದ ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ರವರು ಅನುದಾನವನ್ನು ಬಿಡುಗಡೆಗೊಳಿಸುವುದು.

c) ರಾಜ್ಯ ಮಟ್ಟದ ಡಿಡಿಓಗಳು ಡಿಬಿಟಿ ಮಾಡಲು ರಾಜ್ಯ ಡಿಬಿಟಿ ಪೋರ್ಟಲ್ ಮೂಲಕ ಖಜಾನೆ 2ಗೆ ಪಾವತಿ ಸೂಚನೆಗಳನ್ನು ಸಲ್ಲಿಸುವುದು.

### 7. ಜಿಲ್ಲಾ ಉದ್ಯೋಗ ಅಧಿಕಾರಿಗಳಿಂದ ಮಾಡಬೇಕಾದ ಪರಿಶೀಲನೆಗಳು:

ಎಲ್ಲಾ ಜಿಲ್ಲಾ ಉದ್ಯೋಗ ಅಧಿಕಾರಿಗಳು ಯಾದೃಚ್ಛಿಕ (Random) ಆಧಾರದ ಮೇಲೆ ಒಟ್ಟು ಯುವನಿಧಿ ಫಲಾನುಭವಿಗಳ 5% - 10% ಅನ್ನು ಪರಿಶೀಲಿಸಬೇಕು. ಪರಿಶೀಲನೆಯ ನಂತರ, ಯಾವುದೇ ಅನರ್ಹ ಫಲಾನುಭವಿಗಳು ಕಂಡುಬಂದರೆ, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಆಯುಕ್ತರಿಗೆ ವರದಿ ಮಾಡುವುದು.

# <u>ಯುವನಿಧಿ ಯೋಜನೆಗೆ ನಿರಂತರವಾಗಿ ಕೇಳುವ ಪ್ರಶ್ನೆಗಳು ಹಾಗೂ ಉತ್ತರಗಳು</u>

| | |
|---|---|
| **1.** | **ಯುವನಿಧಿ ಯೋಜನೆ ಎಂದರೇನು?** |
| ಉತ್ತರ: | ಕರ್ನಾಟಕ ರಾಜ್ಯ ಸರ್ಕಾರವು ಪದವಿ ಹಾಗೂ ಡಿಪ್ಲೋಮಾ ಕೋರ್ಸ್‌ಗಳನ್ನು 2022–23ನೇ ಶೈಕ್ಷಣಿಕ ಸಾಲಿನಲ್ಲಿ ವ್ಯಾಸಂಗ ಮಾಡಿ 2023ರಲ್ಲಿ ತೇರ್ಗಡೆಯಾದ ಕರ್ನಾಟಕ ರಹವಾಸಿಗಳಿಗೆ ನಿರುದ್ಯೋಗ ಭತ್ಯೆಯನ್ನು ನೀಡುವ ಖಾತರಿ ಯೋಜನೆಯಾಗಿರುತ್ತದೆ. ಪದವೀದಧರರಿಗೆ ರೂ. 3000/– ಮತ್ತು ಡಿಪ್ಲೋಮಾ ತೇರ್ಗಡೆಯಾದವರಿಗೆ ರೂ.1500/– ನಿರುದ್ಯೋಗ ಭತ್ಯೆಯನ್ನು 2 ವರ್ಷದವರೆಗೆ ನೀಡಲಾಗುವುದು. |
| **2.** | **ಯುವನಿಧಿ ಯೋಜನೆಗೆ ಹೇಗೆ ಅರ್ಜಿ ಸಲ್ಲಿಸಬಹುದು?** |
| ಉತ್ತರ: | ಅಭ್ಯರ್ಥಿಗಳು ಸೇವಾ ಸಿಂಧು ಜಾಲತಾಣದಲ್ಲಿ ಅರ್ಜಿ ಸಲ್ಲಿಸುವುದು. https://sevasindhugs.karnataka.gov.in/ |
| **3.** | **ಯುವನಿಧಿ ಯೋಜನೆಯ ಫಲಾನುಭವಿಗಳಾಗಲು ಅರ್ಹತೆಗಳೇನು?** |
| ಉತ್ತರ: | ಪದವಿ/ಡಿಪ್ಲೋಮಾ ಗಳನ್ನು 2022–23ನೇ ಸಾಲಿನಲ್ಲಿ ವ್ಯಾಸಂಗ ಮಾಡಿರಬೇಕು ಹಾಗೂ 2023ರಲ್ಲಿ ತೇರ್ಗಡೆಯಾಗಿದ್ದು 180 ದಿವಸಗಳವರೆಗೆ ನಿರುದ್ಯೋಗಿಗಳಾಗಿ ಅಭ್ಯರ್ಥಿಗಳು ಕನಿಷ್ಠ 6 ವರ್ಷ ಕರ್ನಾಟಕ ರಹವಾಸಿಗಳಾಗಿರಬೇಕು. |
| **4.** | **ಯುವನಿಧಿ ಯೋಜನೆಗೆ ಯಾರು ಅನರ್ಹರು?** |
| ಉತ್ತರ: | ಸರ್ಕಾರಿ ಹಾಗೂ ಖಾಸಗಿ ಕ್ಷೇತ್ರದಲ್ಲಿ ಉದ್ಯೋಗದಲ್ಲಿರುವವರು ಸ್ವ–ಉದ್ಯೋಗಿಗಳು, ಕನಿಷ್ಠ 6 ವರ್ಷ ಕರ್ನಾಟಕ ರಹವಾಸಿಗಳಲ್ಲದವರು ಮತ್ತು ಪದವಿ/ಡಿಪ್ಲೋಮಾ ಕೋರ್ಸ್‌ನ್ನು ಕರ್ನಾಟಕ ಹೊರತಾಗಿ ಬೇರೆ ರಾಜ್ಯದಲ್ಲಿ ವ್ಯಾಸಂಗ ಮಾಡಿದವರು, ಉನ್ನತ ಶಿಕ್ಷಣದಲ್ಲಿ ವ್ಯಾಸಂಗ ಮಾಡುತ್ತಿರುವವರು ಅನರ್ಹರು. |
| **5.** | **ಯುವನಿಧಿ ಯೋಜನೆಗೆ ಕರ್ನಾಟಕದ ರಹವಾಸಿ ಎಂದರೆ ಯಾರು?** |
| ಉತ್ತರ: | ಕರ್ನಾಟಕದ ರಹವಾಸಿ ಎಂದರೆ ಕರ್ನಾಟಕದಲ್ಲಿ ಪದವಿ/ಡಿಪ್ಲೋಮಾ ವ್ಯಾಸಂಗದವರೆಗೆ ಕನಿಷ್ಠ 6 ವರ್ಷ ವಾಸವಿರಬೇಕು. |
| **6.** | **ಕರ್ನಾಟಕದ ರಹವಾಸಿ ಎಂದು ಹೇಗೆ ಪರಿಶೀಲಿಸಲಾಗುವುದು?** |
| ಉತ್ತರ: | ಕರ್ನಾಟಕದಲ್ಲಿ 6 ವರ್ಷಗಳ ‘‘ವಾಸವಿರುವ ವಿದ್ಯಾರ್ಥಿ’ ಎಂದು ಈ ಕೆಳಗಿನಂತೆ ಪರಿಶೀಲಿಸಲಾಗುತ್ತದೆ:<br>1. ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ, ಪಿಯುಸಿ ಅಂಕಪಟ್ಟಿ ಮತ್ತು ಪದವಿ ಪ್ರಮಾಣ ಪತ್ರ / ಅಂಕಪಟ್ಟಿಗಳು ಅಥವಾ<br>2. ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ, ಪಿಯುಸಿ ಅಂಕಪಟ್ಟಿ ಮತ್ತು ಡಿಪ್ಲೋಮಾ ಪ್ರಮಾಣ ಪತ್ರ ಅಥವಾ ಅಂಕಪಟ್ಟಿ ಅಥವಾ<br>3. ಸಾಮಾನ್ಯ ಪ್ರವೇಶ ಪರೀಕ್ಷೆಯ (ಸಿಇಟಿ) ನೋಂದಣಿ ಸಂಖ್ಯೆ ಮತ್ತು ಪದವಿ ಪ್ರಮಾಣ ಪತ್ರ ಅಥವಾ<br>4. ಪಡಿತರ ಚೀಟಿ ನೀಡಿದ ದಿನಾಂಕ ಮತ್ತು ಪದವಿ ಪ್ರಮಾಣ ಪತ್ರ. |
| **7.** | **ಯುವನಿಧಿ ಯೋಜನೆಗೆ ಪ್ರಯೋಜನಗಳನ್ನು ಪಡೆಯುವ ಅಭ್ಯರ್ಥಿ ನೋಂದಾಯಿಸಲು 180 ದಿನಗಳು ಪೂರ್ಣಗೊಳ್ಳುವವರೆಗೆ ಕಾಯಬೇಕೆ?** |
| ಉತ್ತರ: | ಇಲ್ಲ. ಪದವಿ/ಡಿಪ್ಲೋಮಾ ಫಲಿತಾಂಶ ಪ್ರಕಟವಾದ ನಂತರದಲ್ಲಿ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ. |
| **8.** | **ಯುವನಿಧಿ ಯೋಜನೆಯಡಿ ನೋಂದಾಯಿಸಿದ ತಕ್ಷಣವೇ ಸೌಲಭ್ಯಗಳನ್ನು ಅಭ್ಯರ್ಥಿಗೆ ನೀಡಲಾಗುವುದೇ?** |
| ಉತ್ತರ: | ನೋಂದಾಯಿತ ಅಭ್ಯರ್ಥಿಗಳು ಪದವಿ/ಡಿಪ್ಲೋಮಾ ತೇರ್ಗಡೆಯಾದ ನಂತರ 180 ದಿವಸಗಳು ಪೂರೈಸಿರಬೇಕು. ಅಂತಹ ಅಭ್ಯರ್ಥಿಗಳಿಗೆ ನಿರುದ್ಯೋಗ ಭತ್ಯೆಯನ್ನು ನೀಡಲಾಗುವುದು. |
| **9.** | **ಯುವನಿಧಿ ಯೋಜನೆಯಡಿ ಸೌಲಭ್ಯಗಳನ್ನು ಅಭ್ಯರ್ಥಿಗೆ ಎಲ್ಲಿಯವರೆಗೆ ನೀಡಲಾಗುವುದು?** |
| ಉತ್ತರ: | ಯೋಜನೆಯಲ್ಲಿ ನೋಂದಾಯಿಸಿದ ನಂತರ 2 ವರ್ಷದವರೆಗೆ ನಿರುದ್ಯೋಗ ಭತ್ಯೆಯನ್ನು ನೀಡಲಾಗುವುದು. |

| | |
|---|---|
| 10. | **ಅಭ್ಯರ್ಥಿಗಳು ತಮ್ಮ ಪ್ರಮಾಣ ಪತ್ರಗಳನ್ನು NAD ಪೋರ್ಟಲ್‌ನಲ್ಲಿ ಇಂದೀಕರಿಸಿದ ಬಗ್ಗೆ ಹೇಗೆ ಪರಿಶೀಲಿಸಿಕೊಳ್ಳಬಹುದು?** |
| ಉತ್ತರ: | ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ NAD ಪೋರ್ಟಲ್ ಲಿಂಕ್‌ನ್ನು ಬಳಸಿಕೊಂಡು ಅಭ್ಯರ್ಥಿಗಳು ತಮ್ಮ ಪ್ರಮಾಣ ಪತ್ರಗಳು ಇಂದೀಕರಿಸಲಾಗಿದೆ ಎಂದು ತಿಳಿದುಕೊಳ್ಳಲು ಪದವಿ/ಡಿಪ್ಲೋಮಾ ಪತ್ರಗಳಲ್ಲಿರುವ ನೋಂದಣಿ ಸಂಖ್ಯೆಯನ್ನು ಲಾಗಿನ್ ಮಾಡಿ ಪರಿಶೀಲಿಸಿಕೊಳ್ಳಬಹುದು. |
| 11. | **ವಿಶ್ವವಿದ್ಯಾನಿಲಯಗಳು ಮತ್ತು ಮಂಡಳಿಗಳು NAD ನಲ್ಲಿ ಪದವಿ/ಡಿಪ್ಲೋಮಾ ಪ್ರಮಾಣ ಪತ್ರಗಳನ್ನು ಅಫ್‌ಲೋಡ್ ಮಾಡದಿದ್ದ ಪಕ್ಷದಲ್ಲಿ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಸಾಧ್ಯವಾಗುವುದಿಲ್ಲವೇ?** |
| ಉತ್ತರ: | ವಿಶ್ವವಿದ್ಯಾನಿಲಯಗಳು ಮತ್ತು ಮಂಡಳಿಗಳು NAD ನಲ್ಲಿ ಪದವಿ/ಡಿಪ್ಲೋಮಾ ಪ್ರಮಾಣ ಪತ್ರಗಳನ್ನು ಅಫ್‌ಲೋಡ್ ಮಾಡದಿದ್ದ ಪಕ್ಷದಲ್ಲಿ ಅಭ್ಯರ್ಥಿಗಳು ಮ್ಯಾನ್ಯುಯಲ್ (Manual) ಆಗಿ ಅಪ್‌ಲೋಡ್ ಮಾಡಬಹುದು. ನಂತರ ದಾಖಲಾತಿಗಳನ್ನು ಪರಿಶೀಲಿಸಲಾಗುವುದು. ಅಂತಹ ಅಭ್ಯರ್ಥಿಗಳ ದತ್ತಾಂಶವನ್ನು ಸಂಬಂಧಪಟ್ಟ ವಿಶ್ವವಿದ್ಯಾನಿಲಯಗಳಿಗೆ ಇಂದೀಕರಿಸಲು ಕ್ರಮವಹಿಸುವಂತೆ ಕಳುಹಿಸಿಕೊಡಲಾಗುವುದು. |
| 12. | **ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮುಂಚಿತವಾಗಿ ಖಚಿತಪಡಿಸಿಕೊಳ್ಳಬೇಕಾದ ಇತರ ದಾಖಲೆಗಳು ಯಾವುವು?** |
| ಉತ್ತರ: | ಅಭ್ಯರ್ಥಿಗಳು ಆಧಾರ್ ಸೀಡೆಡ್ ಬ್ಯಾಂಕ್ ಖಾತೆ, ಇ–ಮೇಲ್ ಐಡಿ, ಮೊಬೈಲ್ ಸಂಖ್ಯೆ ಬಗ್ಗೆ ಮುಂಚಿತವಾಗಿ ಖಚಿತಪಡಿಸಿಕೊಳ್ಳತಕ್ಕದು. |
| 13. | **ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ನೀಡಬೇಕಾದ ಘೋಷಣೆಗಳೇನು?** |
| ಉತ್ತರ: | ಅಭ್ಯರ್ಥಿಗಳು ತಾನು ಕರ್ನಾಟಕ ರಹವಾಸಿಯೆಂದು, ಸರ್ಕಾರಿ / ಖಾಸಗಿ ಉದ್ಯೋಗದಲ್ಲಿಲ್ಲವೆಂದು, ಸ್ವ–ಉದ್ಯೋಗಿಯಲ್ಲವೆಂದು ಮತ್ತು ಉನ್ನತ ಶಿಕ್ಷಣ ವ್ಯಾಸಂಗ ಮಾಡುತ್ತಿಲ್ಲವೆಂದು ಅರ್ಜಿಯ ಪ್ರಾರಂಭದಲ್ಲಿಯೇ ಘೋಷಣೆ ಮಾಡಬೇಕಾಗುತ್ತದೆ. |
| 14. | **ಅಭ್ಯರ್ಥಿಗಳು ಉದ್ಯೋಗ ದೊರಕಿದ ನಂತರ ಏನು ಮಾಡಬೇಕು?** |
| ಉತ್ತರ: | ಅಭ್ಯರ್ಥಿಗಳು ಉದ್ಯೋಗ ದೊರಕಿದ ತಕ್ಷಣ ಪ್ರತಿ ತಿಂಗಳು 25ನೇ ತಾರೀಖಿನೊಳಗೆ ಘೋಷಣೆ ಮಾಡುವ ಸಂದರ್ಭದಲ್ಲಿ ಉದ್ಯೋಗಿಯೆಂದು ಘೋಷಿಸಬೇಕು. |
| 15. | **ಅಭ್ಯರ್ಥಿಗಳು ತಪ್ಪು ಘೋಷಣೆ ನೀಡಿದರೆ ಅಥವಾ ಉದ್ಯೋಗ ಪಡೆದಿರುವುದನ್ನು ಘೋಷಿಸಲು ವಿಫಲವಾದರೆ ಕೈಗೊಳ್ಳುವ ಕ್ರಮಗಳೇನು?** |
| ಉತ್ತರ: | ತಪ್ಪು ಘೋಷಣೆ ನೀಡಿದಲ್ಲಿ ಅಥವಾ ಉದ್ಯೋಗ ಪಡೆದಿರುವುದನ್ನು ಘೋಷಿಸಲು ವಿಫಲವಾದರೆ ದಂಡ ವಿಧಿಸಲಾಗುತ್ತದೆ. ಪಾವತಿಸಿದ ಮೊತ್ತವನ್ನು ಕಾನೂನಿನ ಪ್ರಕಾರ ವಸೂಲಿ ಮಾಡಲಾಗುವುದು. |
| 16. | **ಅಭ್ಯರ್ಥಿಗಳು ಈ ಯೋಜನೆಯಡಿ ನೋಂದಾಯಿಸಿದ ನಂತರ ಸಿಗುವ ಇತರೆ ಪ್ರಯೋಜನಗಳೇನು?** |
| ಉತ್ತರ: | ನೋಂದಾಯಿತ ಅಭ್ಯರ್ಥಿಗಳ ದತ್ತಾಂಶವು ಸ್ಕಿಲ್ ಕನೆಕ್ಟ್ ಪೋರ್ಟಲ್‌ಗೆ ಜೋಡಣೆಯಾಗಿ ಕೌಶಲ್ಯಾಭಿವೃದ್ಧಿ ನಿಗಮದ ವತಿಯಿಂದ ಧೀರ್ಘಾವಧಿ/ಅಲ್ಪವಾಧಿ ತರಬೇತಿಗಳನ್ನು ಪಡೆಯುವಲ್ಲಿ ಮತ್ತು ಈಗಾಗಲೇ ನೋಂದಾಯಿಸಿಕೊಂಡ ಉದ್ಯೋಗದಾತರು ಅಭ್ಯರ್ಥಿಗಳ ದತ್ತಾಂಶವನ್ನು ಬಳಸಿಕೊಂಡು ಉದ್ಯೋಗ ಹೊಂದಾಣಿಕೆ ಮಾಡುವರು. |
| 17. | **ಯುವನಿಧಿ ಯೋಜನೆಯಡಿ ಪ್ರಯೋಜನ ಪಡೆಯಲು ಪ್ರತಿ ಮಾಹೆ ನೋಂದಾಯಿಸಬೇಕೆ?** |
| ಉತ್ತರ: | ಯುವನಿಧಿ ಯೋಜನೆಯಡಿ ಒಮ್ಮೆ ಮಾತ್ರ ನೋಂದಾಯಿಸಿಕೊಂಡು ಪ್ರತಿ ಮಾಹೆ 25ನೇ ತಾರೀಖಿನೊಳಗೆ ಉದ್ಯೋಗದ ಸ್ಥಿತಿಯ ಬಗ್ಗೆ ಸ್ವಯಂ ಘೋಷಣೆ ಮಾಡಿಕೊಳ್ಳತಕ್ಕದ್ದು. |
| 18. | **ಪ್ರತಿ ತಿಂಗಳು 25ನೇ ತಾರೀಖು ಅಥವಾ ಅದಕ್ಕಿಂತ ಮೊದಲು ನಿರುದ್ಯೋಗಿ ಆಗಿರುವ ಕುರಿತು ಘೋಷಣೆ ಮಾಡದಿದ್ದಲ್ಲಿ ಏನಾಗುತ್ತದೆ?** |
| ಉತ್ತರ: | ಪ್ರತಿ ತಿಂಗಳು ಘೋಷಣೆ ಮಾಡದಿದ್ದಲ್ಲಿ 90 ದಿನಗಳ ನಂತರ ನಿಷ್ಕ್ರಿಯಗೊಳಿಸಲಾಗುವುದು. |

| | |
|---|---|
| **19.** | **ಯೋಜನೆಗೆ ನೋಂದಾಯಿಸುವಾಗ ಶುಲ್ಕ ಪಾವತಿಸಬೇಕೆ?** |
| ಉತ್ತರ: | ಇಲ್ಲ. ಇದು ಉಚಿತ ಸೇವೆಯಾಗಿರುತ್ತದೆ. |
| **20.** | **ಈ ಯೋಜನೆಗೆ ನೋಂದಾಯಿಸಲು ಕೊನೆಯ ದಿನಾಂಕ ಯಾವಾಗ?** |
| ಉತ್ತರ: | ಅಭ್ಯರ್ಥಿಗಳು ಪದವಿ/ಡಿಪ್ಲೋಮಾ 2023 ರಲ್ಲಿ ತೇರ್ಗಡೆಯಾದ ನಂತರದಿಂದ ಅರ್ಜಿ ಸಲ್ಲಿಸಲು 2 ವರ್ಷದವರೆಗೆ ಅರ್ಹರಿರುತ್ತಾರೆ. |
| **21.** | **ನೋಂದಣಿ ನಂತರ ನಾನು ಯಾವುದೇ ಸ್ವೀಕೃತಿಯನ್ನು ಪಡೆಯಬಹುದೇ?** |
| ಉತ್ತರ: | ಅರ್ಜಿದಾರರು ಸಮರ್ಪಕವಾಗಿ ಅರ್ಜಿ ಸಲ್ಲಿಸಿದ ಅಂತಿಮ ಹಂತದಲ್ಲಿ ಸ್ವಯಂಚಾಲಿತವಾಗಿ ಸ್ವೀಕೃತಿಯು ಸೃಜಿಸುತ್ತದೆ. ಸ್ವೀಕೃತಿಯನ್ನು ಡೌನ್‌ಮಾಡಿಕೊಳ್ಳುವುದು. |
| **22.** | **ಎನ್.ಎ.ಡಿ (NAD- National Academic Depository) ಎಂದರೇನು?** |
| ಉತ್ತರ: | ಎನ್.ಎ.ಡಿ ಎಂಬುದು ನಿರಂತರವಾಗಿ 24/7 ಆನ್‌ಲೈನ್ ಸೇವೆ ನೀಡುವ ಶೈಕ್ಷಣಿಕ ದತ್ತಾಂಶಗಳಾದ ಪ್ರಮಾಣ ಪತ್ರಗಳು, ಡಿಪ್ಲೋಮಾಗಳ, ಪದವಿಗಳ, ಅಂಕಪಟ್ಟಿಗಳ ಇತ್ಯಾದಿಗಳ ಮಾಹಿತಿ ಕಣಜವಾಗಿದ್ದು, ಶೈಕ್ಷಣಿಕ ಸಂಸ್ಥೆಗಳು/ ಮಂಡಳಿಗಳು/ ಅರ್ಹ ಮೌಲ್ಯಂಕನ ಸಂಸ್ಥೆಗಳು ಅಧಿಕೃತವಾಗಿ ಡಿಜಿಟಲೀಕರಣ ಮಾಡಿ ಶೇಖರಿಸಿರುವ ದತ್ತಾಂಶವಾಗಿರುತ್ತದೆ. NAD ಸಂಸ್ಥೆಯು ಅಭ್ಯರ್ಥಿಗಳಿಗೆ ಸರಳವಾಗಿ ಶೈಕ್ಷಣಿಕ ಮಾಹಿತಿಯು ಲಭಿಸುವಂತೆ ಮಾಡುವುದಲ್ಲದೇ ಮೌಲೀಕರಿಸಿ, ದತ್ತಾಂಶವನ್ನು ನೈಜ್ಯಗೊಳಿಸಿ ಸಂರಕ್ಷಿಸಿರುತ್ತದೆ. |
| **23.** | **ಯುವನಿಧಿ ಯೋಜನೆಗೆ NAD ಸಂಸ್ಥೆಯು ಹೇಗೆ ಸಂಬಂಧಿತವಾಗಿರುತ್ತದೆ?** |
| ಉತ್ತರ: | ಕರ್ನಾಟಕ ರಾಜ್ಯದ ಎಲ್ಲಾ ಶೈಕ್ಷಣಿಕ ದಾಖಲೆಗಳನ್ನು ಒಂದೇ ಮೂಲದಲ್ಲಿ ನಿರಂತರವಾಗಿ ಶೈಕ್ಷಣಿಕವಾಗಿ ದತ್ತಾಂಶವನ್ನು ಒದಗಿಸುವ NAD ಸಂಸ್ಥೆಯು ಯುವನಿಧಿ ಯೋಜನೆಯ ಫಲಾನುಭವಿಗಳ ದಾಖಲಾತಿಗಳ/ ಪ್ರಮಾಣ ಪತ್ರಗಳ ನೈಜತೆಗಳನ್ನು ಪರಿಶೀಲಿಸಲು ಅನುವು ಮಾಡುವ ಪ್ರಕ್ರಿಯೆಯಾಗಿರುತ್ತದೆ. |
| **24.** | **ಯುವನಿಧಿ ಯೋಜನೆಗೆ ಯಾವ ಯಾವ ಶೈಕ್ಷಣಿಕ ದಾಖಲಾತಿಗಳ ಅವಶ್ಯಕತೆಗಳು ಇರುತ್ತವೆ?** |
| ಉತ್ತರ: | ಪದವೀಧರರಾಗಿದ್ದಲ್ಲಿ ಅವರ ಎಸ್.ಎಸ್.ಎಲ್.ಸಿ/ ಪಿ.ಯು.ಸಿ ಮತ್ತು ಪದವಿ ಶೈಕ್ಷಣಿಕ ಪ್ರಮಾಣ ಪತ್ರಗಳು ಹಾಗೂ ಡಿಪ್ಲೋಮಾ ತೇರ್ಗಡೆಯಾಗಿದ್ದಲ್ಲಿ ಎಸ್.ಎಸ್.ಎಲ್.ಸಿ/ ಪಿ.ಯು.ಸಿ ಮತ್ತು ಡಿಪ್ಲೋಮಾ ಶೈಕ್ಷಣಿಕ ಪ್ರಮಾಣ ಪತ್ರಗಳ ಅವಶ್ಯಕತೆ ಇರುತ್ತದೆ. |
| **25.** | **ತಾತ್ಕಾಲಿಕ ಪದವಿ ಪ್ರಮಾಣ ಪತ್ರ ಎಂದರೇನು? (PDC)** |
| ಉತ್ತರ: | ಅಭ್ಯರ್ಥಿಯು ಆಯಾ ವಿಶ್ವವಿದ್ಯಾನಿಲಯಗಳಿಂದ ಪದವಿ ತೇರ್ಗಡೆಯಾದ ನಂತರ ನೀಡುವ ತಾತ್ಕಾಲಿಕ ಪದವಿ ಪ್ರಮಾಣ ಪತ್ರವಾಗಿರುತ್ತದೆ. ಹಾಗೆಯೇ ಡಿಪ್ಲೋಮಾ ತೇರ್ಗಡೆಯಾದ ನಂತರವೂ ತಾತ್ಕಾಲಿಕ ಡಿಪ್ಲೋಮಾ ಪ್ರಮಾಣ ಪತ್ರವನ್ನು ಆಯಾ ಶೈಕ್ಷಣಿಕ ಸಂಸ್ಥೆಗಳು/ ಮಂಡಳಿಗಳು ವಿತರಿಸುವ ಪ್ರಮಾಣ ಪತ್ರವಾಗಿರುತ್ತದೆ. |
| **26.** | **ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಲು ಯಾವ ಶೈಕ್ಷಣಿಕ ಪ್ರಮಾಣ ಪತ್ರವನ್ನು ನಾನು ಪಡೆದಿರಬೇಕು?** |
| ಉತ್ತರ: | ಅಭ್ಯರ್ಥಿಗಳು ಆಯಾ ವಿಶ್ವವಿದ್ಯಾನಿಲಯಗಳಿಂದ ನೀಡಿದ ಪದವಿ ಪ್ರಮಾಣ ಪತ್ರ ಹಾಗೂ ನೋಂದಣಿ ಸಂಖ್ಯೆ ಮತ್ತು ಡಿಪ್ಲೋಮಾ ಕಾಲೇಜು/ ಮಂಡಳಿಯಿಂದ ನೀಡಿರುವಂತಹ ಪ್ರಮಾಣಪತ್ರ ಹಾಗೂ ನೋಂದಣಿ ಸಂಖ್ಯೆಯನ್ನು ಬಳಸಿಕೊಂಡು ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ನಮೂದಿಸಬೇಕಾಗಿರುತ್ತದೆ. |
| **27.** | **ವಿಶ್ವವಿದ್ಯಾನಿಲಯ ನೊಂದಣಿ ಸಂಖ್ಯೆ (University Registration Number) ಎಂದರೇನು?** |
| ಉತ್ತರ: | ವಿಶ್ವವಿದ್ಯಾನಿಲಯ ನೋಂದಣಿ ಸಂಖ್ಯೆ ಎಂದರೆ ಆಯಾ ಅಭ್ಯರ್ಥಿಗಳು ಶೈಕ್ಷಣಿಕ ಸಂಸ್ಥೆಗೆ / ವಿಶ್ವವಿದ್ಯಾನಿಲಯಗಳ ಕೋರ್ಸ್‌ಗಳಿಗೆ ಪ್ರವೇಶಾತಿಯನ್ನು ಪಡೆದ ನಂತರ ನೀಡುವ ವಿಶೇಷ ನೋಂದಣಿ ಸಂಖ್ಯೆಯಾಗಿರುತ್ತದೆ. |

| | |
|---|---|
| 28. | **ಎಲ್ಲಿ ನನಗೆ ವಿಶ್ವವಿದ್ಯಾನಿಲಯದ ನೋಂದಣಿ ಸಂಖ್ಯೆ ಲಭಿಸುತ್ತದೆ?** |
| ಉತ್ತರ: | ವಿಶ್ವವಿದ್ಯಾನಿಲಯಗಳು/ ಶೈಕ್ಷಣಿಕ ಸಂಸ್ಥೆಗಳು/ ಮಂಡಳಿಗಳು ಅಭ್ಯರ್ಥಿಗಳಿಗೆ ನೀಡುವ ಪದವಿ/ ಡಿಪ್ಲೋಮಾ/ ತಾತ್ಕಾಲಿಕ ಪದವಿ ಪ್ರಮಾಣ ಪತ್ರಗಳ ಮೇಲೆ ನಮೂದಿಸಿರುವ ಸಂಖ್ಯೆಯು ಲಭ್ಯವಿರುತ್ತದೆ. |
| 29. | **NAD ಪೋರ್ಟಲ್‌ನಲ್ಲಿ ನನ್ನ ಪ್ರಮಾಣ ಪತ್ರಗಳು (ದಾಖಲೆಗಳು) ಲಭ್ಯವಿದೆಯೇ ಎಂಬುದನ್ನು ತಿಳಿಯುವುದು ಹೇಗೆ?** |
| ಉತ್ತರ: | ಅರ್ಜಿದಾರರು NAD portal ಜಾಲತಾಣ https://nad.karnataka.gov.in ರಲ್ಲಿ ವಿಶ್ವವಿದ್ಯಾನಿಲಯಗಳು/ ಶೈಕ್ಷಣಿಕ ಸಂಸ್ಥೆಗಳು/ ಮಂಡಳಿಗಳು ಪ್ರವೇಶಾತಿ ಸಂದರ್ಭದಲ್ಲಿ ನೀಡುವ ಪದವಿ/ ಡಿಪ್ಲೋಮಾ/ ತಾತ್ಕಾಲಿಕ ಪದವಿ ಪ್ರಮಾಣ ಪತ್ರಗಳ ಮೇಲೆ ನಮೂದಿಸಿರುವ ನೊಂದಣಿ ಸಂಖ್ಯೆಯನ್ನು ಬಳಸಿಕೊಂಡು ದತ್ತಾಂಶವು ಲಭ್ಯವಿದೆಯೇ ಅಥವಾ ಇಲ್ಲವೇ ಎಂಬುದರ ಬಗ್ಗೆ ಖಾತರಿ ಪಡಿಸಿಕೊಳ್ಳಬಹುದು. |
| 30. | **ಒಂದು ವೇಳೆ ನನ್ನ ಪ್ರಮಾಣ ಪತ್ರಗಳು NAD portal ನಲ್ಲಿ ಲಭ್ಯವಿಲ್ಲದಿದ್ದಲ್ಲಿ ಏನು ಮಾಡಬೇಕು?** |
| ಉತ್ತರ: | ಅಭ್ಯರ್ಥಿಗಳು ಅವರಿಗೆ ಸಂಬಂಧಿಸಿದ ವಿಶ್ವವಿದ್ಯಾನಿಲಯಗಳಿಗೆ/ ಶೈಕ್ಷಣಿಕ ಸಂಸ್ಥೆಗಳಿಗೆ/ ಮಂಡಳಿಗೆ ಸಂಪರ್ಕಿಸಿ ಇಂದೀಕರಿಸುವಂತೆ ಕೋರುವುದು. |
| 31. | **ನನಗೆ ವಿಶ್ವವಿದ್ಯಾನಿಲಯವು ಭೌತಿಕ ಪ್ರಮಾಣ ಪತ್ರಗಳನ್ನು/ ತಾತ್ಕಾಲಿಕ ಪದವಿ ಪ್ರಮಾಣ ಪತ್ರಗಳನ್ನು ನೀಡದಿದ್ದಲ್ಲಿ ಎಲ್ಲಿ ಪಡೆಯಬಹುದು?** |
| ಉತ್ತರ: | ಅಭ್ಯರ್ಥಿಗಳು ದಾಖಲೆಗಳನ್ನು ಪಡೆಯಲು DigiLocker portal ಜಾಲತಾಣ https://accounts.digilocker.gov.in/signup/smart_v2 ದಲ್ಲಿ ಲಾಗಿನ್ ಆಗಿ ಡಿಜಿಟೀಕರಿಸಿದ ಶೈಕ್ಷಣಿಕ ಪ್ರಮಾಣ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು. |
| 32. | **ಯುವನಿಧಿ ಯೋಜನೆಗೆ ನಾನು ಯಾವಾಗ ಅರ್ಜಿ ಸಲ್ಲಿಸಬೇಕು?** |
| ಉತ್ತರ: | ಅರ್ಜಿದಾರರು ಅವರ ಪದವಿ/ ಡಿಪ್ಲೋಮಾ ತೇರ್ಗಡೆಯಾಗಿ ಫಲಿತಾಂಶ ಬಂದ ನಂತರ (2022–23 ಶೈಕ್ಷಣಿಕ ವರ್ಷ ಮತ್ತು 2023 ಫಲಿತಾಂಶ ತೇರ್ಗಡೆ ವರ್ಷ) ಅರ್ಜಿಸಲ್ಲಿಸಬಹುದು ಆದರೆ ಪದವಿ/ ಡಿಪ್ಲೋಮಾ ತೇರ್ಗಡೆಯಾದ 180 ದಿವಸಗಳ ನಂತರ ನಿರುದ್ಯೋಗ ಭತ್ಯೆಯನ್ನು ಪಡೆಯಲು ಅರ್ಹರು. |
| 33. | **ಯುವನಿಧಿ ಯೋಜನೆಯಲ್ಲಿ ನಾನು ಅರ್ಹನಾಗುವ ಮುಂಚೆ ಯಾವ ದಿನಾಂಕವನ್ನು ಲೆಕ್ಕಚಾರ ಮಾಡಿ 180 ದಿವಸಗಳೆಂದು ಪರಿಗಣಿಸಿ ನಿರುದ್ಯೋಗ ಭತ್ಯೆಯನ್ನು ಪಡೆಯಲು ಅರ್ಹತೆ ಬರುತ್ತದೆ?** |
| ಉತ್ತರ: | ಅಭ್ಯರ್ಥಿಗಳು ತಮ್ಮ ಪದವಿ/ ಡಿಪ್ಲೋಮಾ ಫಲಿತಾಂಶ ಪ್ರಕಟವಾದ ದಿನದಿಂದ 180 ದಿವಸಗಳವರೆಗೆ ಅಥವಾ ನಂತರವೂ ಅರ್ಜಿಸಲ್ಲಿಸಲು ಅರ್ಹರಿರುತ್ತಾರೆ. ಆದರೆ ಫಲಿತಾಂಶ ಪ್ರಕಟವಾಗಿ 180 ದಿವಸಗಳ ಅವಧಿಯನ್ನು ಪೂರೈಸಿದ ಅಭ್ಯರ್ಥಿಗಳಿಗೆ ಮಾತ್ರ ನಿರುದ್ಯೋಗ ಭತ್ಯೆಯನ್ನು ಪಡೆಯಲು ಅರ್ಹರಾಗುತ್ತಾರೆ. |
| 34. | **ನನ್ನ ವಿಶ್ವವಿದ್ಯಾನಿಲಯವು ಇಲ್ಲಿಯವರೆಗೆ ಪದವಿ/ ಡಿಪ್ಲೋಮಾ ಪ್ರಮಾಣ ಪತ್ರಗಳನ್ನು ನೀಡಿರುವುದಿಲ್ಲ. ನಾನು ತಾತ್ಕಾಲಿಕ ಪದವಿ ಪ್ರಮಾಣ ಪತ್ರಗಳನ್ನು DigiLocker portal ಖಾತೆಯಲ್ಲಿ ಪಡೆಯಬಹುದೇ?** |
| ಉತ್ತರ: | ಹೌದು, ಅಭ್ಯರ್ಥಿಗಳು ಅವರುಗಳ ಪದವಿ/ ಡಿಪ್ಲೋಮಾ/ ತಾತ್ಕಾಲಿಕ ಪದವಿ ಪ್ರಮಾಣ ಪತ್ರಗಳನ್ನು DigiLocker ಖಾತೆಯಲ್ಲಿ ಪಡೆಯಬಹುದು. |
| 35. | **ಯುವನಿಧಿ ಯೋಜನೆಗೆ ಕೇವಲ ಕರ್ನಾಟಕದ ಶೈಕ್ಷಣಿಕ ಸಂಸ್ಥೆಗಳನ್ನು ಪರಿಗಣಿಸಲಾಗಿದಯೇ?** |
| ಉತ್ತರ: | ಹೌದು, ಈ ಯೋಜನೆಯು ಕರ್ನಾಟಕದ ನಿರುದ್ಯೋಗ ಯುವಕ/ ಯುವತಿಯರಿಗೆ ಸೀಮಿತಗೊಳಿಸಿರುವುದಲ್ಲದೇ ಯುವನಿಧಿ ಅರ್ಜಿ ನಮೂನೆಯಲ್ಲಿ ಕರ್ನಾಟಕದ ಶೈಕ್ಷಣಿಕ ಸಂಸ್ಥೆಗಳ ದತ್ತಾಂಶವನ್ನು ಸೇವಾಸಿಂಧು ಪೋರ್ಟಲ್‌ನಲ್ಲಿ ದಾಖಲಿಸಲಾಗಿರುತ್ತದೆ. |

| | |
|---|---|
| **36.** | **ನನ್ನ ಪದವಿ/ ಡಿಪ್ಲೋಮಾ/ ತಾತ್ಕಾಲಿಕ ಪ್ರಮಾಣ ಪತ್ರದಲ್ಲಿ ಫಲಿತಾಂಶ ಪ್ರಕಟಿತ ದಿನಾಂಕದ ಆಧಾರದನ್ವಯ 180 ದಿವಸಗಳೊಳಗೆ ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಲು ಸಾಧ್ಯವಾಗಿರುವುದಿಲ್ಲ. ನಾನು ಕೂಡ ಅರ್ಹನೇ?** |
| ಉತ್ತರ: | ಅರ್ಜಿದಾರರು ಯುವನಿಧಿ ಯೋಜನೆಯಲ್ಲಿ ಅರ್ಜಿಸಲ್ಲಿಸಲು 2 ವರ್ಷದವರೆವಿಗೂ ತಮ್ಮ ಪದವಿ/ ಡಿಪ್ಲೋಮಾ ಫಲಿತಾಂಶದ ನಂತರ ಅವಕಾಶವಿರುತ್ತದೆ. ಈ ಅವಧಿಯಲ್ಲಿ ಯಾವಾಗ ಅಭ್ಯರ್ಥಿಗಳು ಅರ್ಜಿ ಸಲ್ಲಿಸುತ್ತಾರೋ ಹಾಗೂ ಅಂತಹವರಿಗೆ 2 ವರ್ಷಕ್ಕೆ ಸೀಮಿತವಾಗಿ ನಿರುದ್ಯೋಗ ಭತ್ಯೆಯನ್ನು ಪಡೆಯಲು ಅರ್ಹರಿರುತ್ತಾರೆ. |
| **37.** | **ಯುವನಿಧಿ ಯೋಜನೆಗೆ ಅಂತಿಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವವರು ಅರ್ಜಿ ಸಲ್ಲಿಸಬಹುದೇ?** |
| ಉತ್ತರ: | ಇಲ್ಲ, ಅರ್ಜಿದಾರರು 2022–23 ಶೈಕ್ಷಣಿಕ ವರ್ಷದಲ್ಲಿ ವ್ಯಾಸಂಗ ಮಾಡಿ 2023 ರಲ್ಲಿ ತೇರ್ಗಡೆಯಾಗಿದ್ದಲ್ಲಿ ಮಾತ್ರ ಅರ್ಹರು. |